# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಉತ್ತರ ಕನ್ನಡ ಜಿಲ್ಲೆಯ 6 ಅನುಮೋದಿತ ಯೋಜನೆಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅನುವಾಗುವಂತೆ ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಹಸ್ತಾಂತರಿಸುವ ಬಗ್ಗೆ.

----

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಜಸಂಇ 9 ವಿಬ್ಯಾತ 03 ಬೆಂಗಳೂರು, ದಿನಾಂಕ:10-10-2003.
2) ಸರ್ಕಾರದ ಆದೇಶ ಸಂಖ್ಯೆ: ಜಸಂಇ 9 ವಿಬ್ಯಾತ 03 ಬೆಂಗಳೂರು, ದಿನಾಂಕ:03-07-2003.
3) ಸರ್ಕಾರದ ಆದೇಶ ಸಂಖ್ಯೆ:ಜಸಂಇ 9 ವಿಬ್ಯಾತ 03(ಭಾಗ-1) ಬೆಂಗಳೂರು, ದಿನಾಂಕ:12-11-2003.
4) ಸರ್ಕಾರದ ಆದೇಶ ಸಂಖ್ಯೆ:ಜಸಂಇ 4 ವಿಬ್ಯಾತ 05 ಬೆಂಗಳೂರು, ದಿನಾಂಕ:08-09-2005.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನಗಾಂವ್ ಕೆರೆಯ ಆಧುನೀಕರಣ ಯೋಜನೆ ಕಾಮಗಾರಿ ಮೊತ್ತ - ರೂ 162.410 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ ಉತ್ತರ ಕನ್ನಡ ಜಿಲ್ಲೆಯ ಸಂತೆಗುಳಿ – ಹೊನ್ನಾವರ ಜೋಡ್ ರಸ್ತೆಯ ಕಡನೀರುಹಳ್ಳಿ ಬಳಿ ಬ್ಯಾರೇಜು ನಿರ್ಮಾಣ ಕಾಮಗಾರಿ ಅಂದಾಜು ಮೊತ್ತ – ರೂ 16.00 ಲಕ್ಷಗಳ ಅಂದಾಜಿಗೆ ಮತ್ತು ಉತ್ತರ ಕನ್ನಡ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ 17ರ ಕಿ.ಮೀ. 185ರ(ಕಲಸ್ ಸೇ) ಮೇಲ್ಭಾಗದಲ್ಲಿ ಬಡಗಣಿ ನದಿಗೆ ಅಡ್ಡಲಾಗಿ ಸೂಕ್ತ ಮೂಲದ ತಡೆ ನಿರ್ಮಿಸಿ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿ ಅಂದಾಜು ಮೊತ್ತ – ರೂ 40.57 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರಿ ಆದೇಶದಲ್ಲಿ ಉತ್ತರ ಕನ್ನಡ ಜಿಲ್ಲೆಯ ಕಮ್ಮಾಣಿ, ಹಳಹಳ್ಳಿ ಮತ್ತು ಕಲ್ಲೇಶ್ವರ ಗ್ರಾಮಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಕಾಮಗಾರಿ, ಅಂದಾಜು ಮೊತ್ತ – ರೂ. 249.00 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಸರ್ಕಾರಿ ಆದೇಶದಲ್ಲಿ ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲ್ಲೂಕಿನ ಸಂತೆಗುಳಿ ಗ್ರಾಮದ ಹತ್ತಿರ, ಹಳ್ಳಕ್ಕೆ ಸೇತುವೆ ಕೆಳಭಾಗದಲ್ಲಿ 500 ಮೀ ನಲ್ಲಿ ಅಡ್ಡಲಾಗಿ ಬ್ಯಾರೇಜು ನಿರ್ಮಾಣ ಕಾಮಗಾರಿ ಅಂದಾಜು ಮೊತ್ತ – ರೂ 18.00 ಲಕ್ಷಗಳ ಅಂದಾಜಿಗೆ ಮತ್ತು ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲ್ಲೂಕಿನ ಸಂತೆಗುಳಿ ಗ್ರಾಮದ ಹತ್ತಿರ ಹಳ್ಳಕ್ಕೆ ಸೇತುವೆ ಮೇಲ್ಭಾಗದಲ್ಲಿ 750ಮೀ ನಲ್ಲಿ ಅಡ್ಡಲಾಗಿ ಬ್ಯಾರೇಜು ನಿರ್ಮಾಣ ಕಾಮಗಾರಿ ಅಂದಾಜು ಮೊತ್ತ – ರೂ 22.5 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

೩. ಮೇಲ್ಕಂಡ 6 ಯೋಜನೆಗಳನ್ನು ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಹಸ್ತಾಂತರ... ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಲಾಯಿತು. ಅದರಂತೆ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಜಸಂಇ 4 ವಿಬ್ಯಾಕ 05, ಬೆಂಗಳೂರು. ದಿನಾಂಕ:08-09-2005.</u>**

ಪ್ರಸ್ತಾವನೆಯಲ್ಲಿ ಹೇಳಿರುವ ಉತ್ತರ ಕನ್ನಡ ಜಿಲ್ಲೆಯ 6 ಯೋಜನೆಗಳನ್ನು ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಹಸ್ತಾಂತರಿಸಲಾಗಿದೆ.

2. ಕರ್ನಾಟಕ ನೀರಾವರಿ ನಿಗಮಕ್ಕೆ 2005-06ರ ಆಯವ್ಯಯದಲ್ಲಿ ಒದಗಿಸಿರುವ ಐಇಬಿಆರ್ ಮಿತಿಯಲ್ಲಿಯೇ ಸದರಿ ಕಾಮಗಾರಿಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದೆ.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ:ಲೋಇ:680- ಅಕೋ-1:2005, ದಿನಾಂಕ:27-08-2005ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಶ್ರೀಧರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ(ವಿಬ್ಯಾಕ)

ಗೆ,

1) ಮಹಾಲೇಖಪಾಲರು(ಲೆಕ್ಕ ಪತ್ರ/ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು.
2) ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3) ಪ್ರಧಾನ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
5) ಉಪ ಕಾರ್ಯದರ್ಶಿ, ಕೆಬಿಜೆಎನ್ಎಲ್/ಎಂಎಂಎ, ವಿಶೇಷ ಕರ್ತವ್ಯಾಧಿಕಾರಿ(ತಾಂತ್ರಿಕ-ಎಂಎಂಎ-3) ಅಧೀನ ಕಾರ್ಯದರ್ಶಿ, ತಾಂತ್ರಿಕ-1/ಕೆಬಿಜೆಎನ್ಎಲ್.
6) ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ) ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
8) ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.

*****